21.03.2022 166

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಎ.ತಿಪ್ಪೇಸ್ವಾಮಿ ಇವರು ನಿಯಮ 72 ರಡಿ ಮಂಡಿಸಿರುವ ಸೂಚನೆಗೆ ಹೇಳಿಕೆ**

ವಿಷಯ: ರಾಜ್ಯದ ಪೋಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯ, ಬೆಂಗಳೂರು ಮತ್ತು ಪ್ರಾದೇಶಿಕ ನ್ಯಾಯ ವಿಜ್ಞಾನ ಘಟಕಗಳಲ್ಲಿ ಖಾಲಿ ಇರುವ ಅಪರಾಧ ಸ್ಥಳ ಪರಿಶೀಲನಾ ಅಧಿಕಾರಿ (SOCO)ಹುದ್ದೆಗಳಿಗೆ ನಡೆಯುತ್ತಿರುವ ನೇಮಕಾತಿಯಲ್ಲಿ ರಾಜ್ಯ ಸರ್ಕಾರದ ನೇಮಕಾತಿ ನಿಯಮದ ಪ್ರಕಾರ ಪ್ರತಿಯೊಂದು ನೇಮಕಾತಿಯಲ್ಲಿ ಕನ್ನಡ ಕಡ್ಡಾಯ ಭಾಷೆಯ ಪರೀಕ್ಷೆ ನಡೆಸಿ ಅದರಲ್ಲಿ ಅರ್ಹತೆ ಪಡೆದ ನಂತರ ಮುಂದಿನ ಪರೀಕ್ಷೆಗೆ ಪರಿಗಣಿಸಿ ನೇಮಕಾತಿ ಮಾಡಿಕೊಳ್ಳುವ ನಿಯಮವಿದೆ. ಆದರೆ, ರಾಜ್ಯ ಪೋಲೀಸ್ ಇಲಾಖೆಯಲ್ಲಿ ಈ ನಿಯಮ ಗಾಳಿಗೆ ತೂರಿ, ಕೇವಲ ಮುಖ್ಯ ಪರೀಕ್ಷೆಯನ್ನು ನಡೆಸಲು ಮುಂದಾಗಿದ್ದು, ಇದರಿಂದ, ರಾಜ್ಯದ ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಅದರಲ್ಲೂ ಗ್ರಾಮೀಣ ಭಾಗದ ಪ್ರತಿಭಾವಂತ ಅಭ್ಯರ್ಥಿಗಳಿಗೆ ತುಂಬಾ ಅನ್ಯಾಯವಾಗಿ ಮುಂದೆ ಅವರು ಜೀವನದಲ್ಲಿ ಬಹಳ ತೊಂದರೆಯನ್ನು ಅನುಭವಿಸಬೇಕಾಗುತ್ತದೆ ಮತ್ತು ಕನ್ನಡ ಭಾಷೆಯು ರಾಜ್ಯದ ಆಡಳಿತ ಭಾಷೆಯಾಗಿದ್ದರಿಂದ ಕನ್ನಡ ಭಾಷೆಯ ತಿಳಿವಳಿಕೆಯು ಅವಶ್ಯವಾಗಿದ್ದು ಮತ್ತು ಕನ್ನಡ ಭಾಷೆಯ ಹಿತದೃಷ್ಟಿಯಿಂದ ಇಂತಹ ನಿರ್ಧಾರವನ್ನು ಕೈಬಿಟ್ಟು ಕಡ್ಡಾಯ ಕನ್ನಡ ಭಾಷೆಯ ಪರೀಕ್ಷೆಯನ್ನು ನಡೆಸಿ ಅದರಲ್ಲಿ ಅರ್ಹತೆ ಪಡೆದವರಿಗೆ ಮಾತ್ರ ನೇಮಕಾತಿಯ ಮುಂದಿನ ಹಂತಕ್ಕೆ ಪರಿಗಣಿಸಿ ಕನ್ನಡಿಗರಿಗೆ ಆಗುವ ಅನ್ಯಾಯವನ್ನು ತಡೆಯಬೇಕಾಗಿರುವುದ ಅವಶ್ಯವಾಗಿದೆ.

ಆದ್ದರಿಂದ, ಇಂತಹ ರಾಜ್ಯದಲ್ಲಿಯು ಕನ್ನಡ ಮಾಧ್ಯಮದಲ್ಲಿ ಕಲಿತ ಯುವ ಸಮುದಾಯಕ್ಕೆ ಆಗುವ ಅನ್ಯಾಯವನ್ನು ತಡೆಯುವ ಸಾರ್ವಜನಿಕ ಮಹತ್ವದ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ.

## ಸರ್ಕಾರದ ಹೇಳಿಕೆ

ಈ ಹಿಂದಿನಿಂದ ಇಲ್ಲಿಯವರೆಗೆ ಪೋಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಸರ್ಕಾರದ ನಾಗರೀಕ ಸೇವಾ(ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ)ನಿಯಮಗಳು 1984ರನ್ವಯ ಆಯ್ಕೆಯಾದ ಅಭ್ಯರ್ಥಿಗಳಲ್ಲಿ ಕನ್ನಡ ಭಾಷಾ ಪರೀಕ್ಷೆಗೆ ವಿನಾಯಿತಿ ಪಡೆದಿರುವ ಅಭ್ಯರ್ಥಿಗಳನ್ನು ಹೊರತುಪಡಿಸಿ, ಉಳಿದ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ ಉತ್ತೀರ್ಣರಾಗದ ಹೊರತು ನೇಮಕಾತಿ ಆದೇಶವನ್ನು ಹೊರಡಿಸಲಾಗುತ್ತಿರಲಿಲ್ಲ.

ಆದರೆ ಪ್ರಸ್ತುತ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 43 ಸೇವನೆ 2020, ದಿನಾಂಕ: 05.03.2021ರ ಕರ್ನಾಟಕ ನಾಗರೀಕ ಸೇವಾ(ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರಲ್ಲಿ ನೇರ ನೇಮಕಾತಿಗಳಲ್ಲಿ ಕನ್ನಡ ಕಡ್ಡಾಯ ಭಾಷಾ ಪರೀಕ್ಷೆಯನ್ನು 150 ಅಂಕಗಳಿಗೆ ಎಲ್ಲಾ ಅಭ್ಯರ್ಥಿಗಳಿಗೆ ನಡೆಸುವಂತೆ ನಿರ್ದೇಶಿಸಲಾಗಿರುತ್ತದೆ. ಅದರಂತೆ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳ ಹುದ್ದೆಗಳಾದ ಅಪರಾಧ ಸ್ಥಳ ಪರಿಶೀಲನಾ ಅಧಿಕಾರಿ(SOCO) ಮತ್ತು ವೈಜ್ಞಾನಿಕ ಅಧಿಕಾರಿ(Scientific Officer) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಎಲ್ಲಾ ಅಭ್ಯರ್ಥಿಗಳಿಗೆ ದಿನಾಂಕ:10.04.2022ರಂದು ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಲಾಗಿರುತ್ತದೆ. ತದನಂತರ ಕನ್ನಡ ಭಾಷಾ ಪರೀಕ್ಷೆಗೆ ನಿಗಧಿಪಡಿಸಿರುವ 150 ಅಂಕಗಳಲ್ಲಿ ಕನಿಷ್ಟ 50 ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಮಾತ್ರ ಅರ್ಹತಾ ಪಟ್ಟಿಗೆ ಪರಿಗಣಿಸಲಾಗುವುದು.

**ಸಂಖ್ಯೆ: ಒಇ 47 ಪಿಇಐ 2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು